3. ಇತರೇ ಸಿಬ್ಬಂದಿಗಳು - 4

ಇ) ಖಾಲಿಯಿರುವ ವೈದ್ಯರ ಹುದ್ದೆಯನ್ನು ಸಾಮಾನ್ಯ ವರ್ಗಾವಣೆ 1998ರ ಸಮಯದಲ್ಲಿ ಭರ್ತಿ ಮಾಡಲಾಗುವುದು. ಸಿಬ್ಬಂದಿವರ್ಗದ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲಾಗುವುದು ಹಾಗೂ ಸಾಮಾನ್ಯ ವರ್ಗಾವಣೆಯ ಸಮಯದಲ್ಲಿ ಭರ್ತಿ ಮಾಡಲಾಗುವುದು.

ಸರ್ಕಾರಿ ವೈದ್ಯರು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕೆಲಸ ನಿರ್ವಹಿಸುತ್ತಿರುವುದು.

666- ಶ್ರೀ ಎ. ರಾಮದಾಸ್ (ಕೃಷ್ಣರಾಜ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರ್ಕಾರಿ ವೈದ್ಯರು ಖಾಸಗೀ ನರ್ಸಿಂಗ್ ಹೋಂಗಳಲ್ಲಿ ಕೆಲಸ ನಿರ್ವಹಿಸುತ್ತಿರುವುದರಿಂದ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ತೊಂದರೆಯಾಗುತ್ತಿರುವ ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರಿ ವೈದ್ಯರು ಖಾಸಗಿ ನರ್ಸಿಂಗ್‌ಹೋಂಗಳಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ನಿಷೇಧಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು?*

ಇ) *ಖಾಸಗೀ ನರ್ಸಿಂಗ್‌ಹೋಂಗಳ ಸಿಯಂತ್ರಣದ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಡಾ|| ಹೆಚ್ ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿರುವುದಿಲ್ಲ

ಆ) ಈ ಬಗ್ಗೆ ಸರ್ಕಾರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ನಿಬಂಧನೆ) ಮಸೂದೆ ಒಂದನ್ನು ತರಲು ಉದ್ದೇಶಿಸಿದ್ದು ಅದು ಪರಿಶೀಲನೆಯಲ್ಲಿರುತ್ತದೆ.

ಇ) ಮೇಲಿನಂತೆ.

ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳಲ್ಲಿ ಅಧ್ಯಾಪಕರ ಕೊರತೆ

667 - ಶ್ರೀ ಎ. ರಾಮದಾಸ್ (ಕೃಷ್ಣರಾಜ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರ್ಕಾರಿ ಮೆಡಿಕಲ್ ಹಾಗೂ ಡೆಂಟಲ್ ಕಾಲೇಜುಗಳಲ್ಲಿ ಅಧ್ಯಾಪಕರ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸದರಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ಕಾಲೇಜುವಾರು, ಹುದ್ದೆವಾರು ವಿವರ ನೀಡುವುದು)*

ಇ) *ಇವುಗಳನ್ನು ತುರ್ತು ಭರ್ತಿ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*